26.	ಜೆ.ಎನ್. ವೈದ್ಯಕೀಯ ಕಾಲೇಜು, ಬೆಳಗಾಂ	150
27.	ಶ್ರೀ ದೇವರಾಜ್ ಅರಸ್ ವೈದ್ಯಕೀಯ ಕಾಲೇಜು, ಕೋಲಾರ	150
28.	ಕೆ.ಎಸ್. ಹೆಗ್ಡೆ ವೈದ್ಯಕೀಯ ಅಕಾಡೆಮಿ, ಮಂಗಳೂರು	100
	ಒಟ್ಟು	2645
	ಅಲ್ಪಸಂಖ್ಯಾತ ವೈದ್ಯಕೀಯ ಸಂಸ್ಥೆಗಳು	
29.	ಆರ್ ಅಮೀನ್ ವೈದ್ಯಕೀಯ ಕಾಲೇಜು, ಬಿಜಾಪುರ	100
30.	ಫಾದರ್ ಮುಲ್ಲರ್ ವೈದ್ಯಕೀಯ ಕಾಲೇಜು, ಮಂಗಳೂರು	100
31.	ಖಾಜಾ ಬಂದನವಾಜ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ	100
32.	ವೈದೇಹಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಂಗಳೂರು	100
33.	ಸಪೋದಯ ವೈದ್ಯಕೀಯ ಕಾಲೇಜು, ರಾಯಚೂರು	100
34.	ಎಸ್.ಡಿ.ಎಂ. ವೈದ್ಯಕೀಯ ಕಾಲೇಜು, ಧಾರವಾಡ	100
35.	ಎಜೆ. ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಗಳೂರು.	100
36.	ಎಂ.ವಿಜ. ವೈದ್ಯಕೀಯ ಕಾಲೇಜು, ಬೆಂಗಳೂರು	100
37.	ರಾಜರಾಜೇಶ್ವರಿ ವೈದ್ಯಕೀಯ ಕಾಲೇಜು, ಬೆಂಗಳೂರು	100
38.	ಯನಪೋಯ ವೈದ್ಯಕೀಯ ಕಾಲೇಜು, ಮಂಗಳೂರು	100
39.	ಸೆಂಟ್ ಜಾನ್ಸ್ ವೈದ್ಯಕೀಯ ಕಾಲೇಜು, ಬೆಂಗಳೂರು	60
	ಒಟ್ಟು	1060
	ಒಟ್ಟು ಮೊತ್ತ	4755

ಕ್ರಮ ಸಂಖ್ಯೆ 219 ಕ್ಕೆ ಉತ್ತರ ಪತ್ರಿಕೆ

ಎ. ಶ್ರೀರಾಮರೆಡ್ಡಿ 23/4/2002
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

219 ಶ್ರೀ ಜಯಚಂದ್ರ ಟಿ.ಬಿ. (ಪಿರಾ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ತುಮಕೂರು ಜಿಲ್ಲೆ, ಪಿರಾ ತಾಲ್ಲೂಕಿಗೆ 100 ಹಾಸಿಗೆಗಳ ಆಸ್ಪತ್ರೆ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಆಸ್ಪತ್ರೆಯಲ್ಲಿ ಇದುವರೆಗೂ ಎಲ್ಲಾ ವರ್ಗದ ಹುದ್ದೆಗಳು ಸಿಬ್ಬಂದಿಗಳು ಖಾಲಿ ಇದ್ದು ತುಂಬದೇ ಇರಲು ಕಾರಣವೇನು;

(ಇ) ಹಾಗಿದ್ದಲ್ಲಿ, ಖಾಲಿ ಇರುವ ವಿವಿಧ ವರ್ಗದ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಶ್ರೀರಾಮುಲು:– (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಬಂದಿದೆ.

(ಆ) ಸದರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿದ ನಂತರ, ಆಸ್ಪತ್ರೆಯ ಕಟ್ಟಡ ಕಾಮಗಾರಿ ನಡೆಯುತ್ತಿದೆ. ಸದರಿ ಕಾಮಗಾರಿಯ ಶೇಕಡಾ 60ರಷ್ಟು ಪೂರ್ಣಗೊಂಡ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹತೆ ಪಡೆಯುತ್ತದೆ.

(ಇ) ಇಲಾಖೆಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು 2008ನೇ ಸಾಲಿನಲ್ಲಿ 815 ವೈದ್ಯರ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರುಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

(ಈ) ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಸಿಬ್ಬಂದಿಯನ್ನು ಭರ್ತಿ ಮಾಡುವ ಸಲುವಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ ಪ್ರಸಕ್ತ ಸಾಲಿನಲ್ಲಿ 3228 ಹುದ್ದೆಗಳು ಹಾಗೂ 1000 ಹುದ್ದೆಗಳನ್ನು ಒಟ್ಟು 4228 ಹುದ್ದೆಗಳನ್ನು ತುಂಬಲು ಮತ್ತು ಮುಂದಿನ ವರ್ಷ 1017 ಹುದ್ದೆಗಳನ್ನು ತುಂಬಲು ಅನುಮತಿ ನೀಡಿದೆ. ಈ ಬಗ್ಗೆ ವಿಶೇಷ ನಿಯಮಗಳನ್ನು ರೂಪಿಸಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ವೈಯಕ್ತಿಕ ಕೊಳವೆ ಬಾವಿಯ ಅನುದಾನ

174 ಶ್ರೀ ಕರಡಿ ಸಂಗಣ್ಣ ಅಮರಪ್ಪ:– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಜನರಿಗೆ ವೈಯಕ್ತಿಕ ಕೊಳವೆ ಬಾವಿ ಮತ್ತು ಸಾಮೂಹಿಕ ನೀರಾವರಿಗಾಗಿ ಈ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನ ಎಷ್ಟು;

(ಆ) ಡಾ: ಡಿ.ಎಂ. ನಂಜುಂಡಪ್ಪ ವರದಿಯ ಅನ್ವಯ ಸದರಿ ಯೋಜನೆಗೆ ಪ್ರತ್ಯೇಕ ಅನುದಾನವನ್ನು ನಿಗದಿಪಡಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ನಿಗದಿಪಡಿಸಿರುವ ಅನುದಾನ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)?

ಶ್ರೀ ಡಿ. ಸುಧಾಕರ್: (ಮಾನ್ಯ ಸಮಾಜ ಕಲ್ಯಾಣ ಸಚಿವರು)

(ಅ) 2008–09ನೇ ಸಾಲಿನ ರಾಜ್ಯದ ಆಯವ್ಯದಲ್ಲಿ ವೈಯಕ್ತಿಕ ಕೊಳವೆ ಬಾವಿ ಮತ್ತು ಸಾಮೂಹಿಕ ನೀರಾವರಿಗಾಗಿ ನಿಗದಿ ಪಡಿಸಲಾದ ಅನುದಾನ ಈ ಕೆಳಕಂಡಂತಿದೆ;